KARNATAKA LEGISLATIVE ASSEMBLY RESEARCH AND REFERENCE BRANCH
PAPER CLIPPINGS
DEPARTMENT / SUBJECT:
NAME OF THE NEWS PAPER:
DATE:

**ಪಿಡಬ್ಲ್ಯುಡಿ ಪ್ರಗತಿ ಪರಿಶೀಲಿಸಿದ ಯಡಿಯೂರಪ್ಪ ಗ್ರಾಮೀಣ, ಜಿಲ್ಲಾ ರಸ್ತೆಗಳು ಮೇಲ್ದರ್ಜೆಗೆ**

# ಬೆಳಗಾವಿಗೆ ಕಚೇರಿಗಳ ಸ್ಥಳಾಂತರಕ್ಕೆ ಸಿಎಂ ಗಡುವು

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬೆಳಗಾವಿಯ ಸುವರ್ಣಸೌಧಕ್ಕೆ ಸ್ಥಳಾಂತರಿಸಬಹುದಾದ ರಾಜ್ಯಮಟ್ಟದ ಸರ್ಕಾರಿ ಕಚೇರಿಗಳನ್ನು ಗುರುತಿಸಿ ತಿಂಗಳಲ್ಲಿ ಅನುಷ್ಠಾನಕ್ಕೆ ತರಬೇಕು ಎಂದು ಹಿರಿಯ ಅಧಿಕಾರಿಗಳಿಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಗಡುವು ವಿಧಿಸಿದ್ದಾರೆ. ಗೃಹ ಕಚೇರಿ 'ಕೃಷ್ಣಾ'ದಲ್ಲಿ ಬುಧವಾರ ನಡೆದ ಲೋಕೋಪಯೋಗಿ, ಬಂದರು ಹಾಗೂ ಒಳನಾಡು ಸಾರಿಗೆ ಇಲಾಖೆ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿ, ನನ್ನ ಸೂಚನೆಯನ್ನು ಗಂಭೀರವಾಗಿ ಪರಿಗಣಿಸಿ ಕಾರ್ಯಗತಗೊಳಿಸಬೇಕು. ಮುಂದಿನ ಸಭೆಯೊಳಗೆ ಹಲವಾರು ಕಚೇರಿಗಳು ಅಲ್ಲಿ ಕಾರ್ಯನಿರ್ವಹಿಸುವುದನ್ನು ಖುದ್ದಾಗಿ ಪರಿಶೀಲಿಸುವೆ ಎಂದು ಎಚ್ಚರಿಸಿದರು. ಪ್ರವಾಹದಿಂದ ಹಾಳಾಗಿರುವ 1800 ರಸ್ತೆಗಳ ಪೈಕಿ 1700 ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿವೆ. ಸೇತುವೆ ನಿರ್ಮಾಣ ಹಾಗೂ ದುರಸ್ತಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದಾಗ, 500 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಂಡಿರುವ ಈ ಕಾಮಗಾರಿಗಳನ್ನು ಆದ್ಯತೆ ಮೇಲೆ ಪೂರ್ಣಗೊಳಿಸುವಂತೆ ತಾಕೀತು ಮಾಡಿದರು.

**ವಿಮಾನ ನಿಲ್ದಾಣ ಕಾಮಗಾರಿ ತ್ವರಿತ:** ಶಿವಮೊಗ್ಗ ನಗರದ ಸೋಗಾನೆ ಗ್ರಾಮದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ಒಂದು ವರ್ಷದ ಅವಧಿಯಲ್ಲಿ ಪೂರ್ಣಗೊಳಿಸಬೇಕು. ವಿಜಯಪುರ ವಿಮಾನ ನಿಲ್ದಾಣದ ನಿರ್ಮಾಣಕ್ಕೆ ಜಮೀನು ಗುರುತಿಸಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಮರುಪರಿಶೀಲಿಸಿ ಕ್ರಮ ಕೈಗೊಳ್ಳಲು ತಿಳಿಸಿದರು.

**ರಸ್ತೆಗಳು ಮೇಲ್ದರ್ಜೆಗೆ:** ರಾಜ್ಯದ 1650 ಕಿಮೀ ಉದ್ದದ ಗ್ರಾಮೀಣ ರಸ್ತೆಯನ್ನು ಜಿಲ್ಲಾ ಮುಖ್ಯ ರಸ್ತೆಯನ್ನಾಗಿ, 10,110 ಕಿಮೀ ಜಿಲ್ಲಾ ಮುಖ್ಯ ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಸಭೆಯಲ್ಲಿ ತೀರ್ಮಾನಿಸಲಾಯಿತು. ಒಟ್ಟು 4813 ರಾಷ್ಟ್ರೀಯ ಹೆದ್ದಾರಿಗಳ ಕಾಮಗಾರಿಗಳನ್ನು 30,675 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಅಂತರ್ಜಲ ವೃದ್ಧಿ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಸೇತುವೆಗಳ ತಳಭಾಗದಲ್ಲಿ ಒಂದು ಮೀಟರ್ ತಡೆಗೋಡೆ ನಿರ್ಮಿಸಿ ನೀರು ಸಂಗ್ರಹಿಸುವಂತೆ ಸಿಎಂ ಸಲಹೆ ನೀಡಿದರು.



## ಟ್ರೇನಿ ಇಂಜಿನಿಯರ್‌ಗಳ ನೇಮಕ

**ಇಂಜಿನಿಯರ್‌ಗಳ ನೇಮಕ ಪ್ರಕ್ರಿಯೆ ವಿಳಂಬವಾಗಿರುವ ಹಿನ್ನೆಲೆ ನಿರುದ್ಯೋಗಿ ಇಂಜಿನಿಯರ್‌ಗಳನ್ನು ಟ್ರೈನಿಗಳೆಂದು ನೇಮಕ ಮಾಡಿಕೊಳ್ಳುವಂತೆ ಮುಖ್ಯಮಂತ್ರಿ ಯಡಿಯೂರಪ್ಪ ಸಭೆಯಲ್ಲಿ ಆದೇಶಿಸಿದ್ದಾರೆ.**

## ಏಕರೂಪ ದರಪಟ್ಟಿಗೆ ಸಮಿತಿ ಅಧ್ಯಯನ

**ವಿವಿಧ ಇಂಜಿನಿಯರಿಂಗ್ ಇಲಾಖೆಗಳ ದರಪಟ್ಟಿಯನ್ನು ಪರಿಶೀಲಿಸಿ ರಾಜ್ಯಾದ್ಯಂತ ಏಕರೂಪದ ದರಪಟ್ಟಿ ಪ್ರಕಟಿಸಲು ಇಲಾಖೆಯ ನಿವೃತ್ತ ಅಧಿಕಾರಿಗಳ ತಾಂತ್ರಿಕ ಸಮಿತಿ ಅಧ್ಯಯನ ನಡೆಸುತ್ತಿದ್ದು, ಶೀಘ್ರವೇ ವರದಿ ಸಲ್ಲಿಸಲಿದೆ ಎಂದು ಲೋಕೋಪಯೋಗಿ ಇಲಾಖೆ ಹೊಂದಿರುವ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಸಭೆಗೆ ತಿಳಿಸಿದರು. ಏಕರೂಪ ದರಪಟ್ಟಿ ಹೊರಬಂದಲ್ಲಿ ನೂರಾರು ಕೋಟಿ ರೂ. ಸರ್ಕಾರಕ್ಕೆ ಉಳಿಯಲಿದೆ ಎಂದರು.**